ಆ) ರೋಣ ತಾಲ್ಲೂಕಿನ ಬೇವಿನಕಟ್ಟೆ ನಾಲಾ ಯೋಜನೆಯನ್ನು ಮಂಜೂರು ಮಾಡಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಇ) ಈ ಯೋಜನೆಯ ಅನುಷ್ಠಾನಕ್ಕೆ ಹಾಗೂ ಪೂರ್ಣಗೊಳಿಸಲು ನಿಗದಿತ ಅವಧಿ ಇದೆಯೆ ?

ಶ್ರೀ ಬಸವರಾಜ್ ಪಾಟೀಲ್ ಅನ್ವರಿ (ಕೃಷಿ ಮಂತ್ರಿ ತೋಟಗಾರಿಕೆ ರಾಜ್ಯ ಸಚಿವರು).—

ಅ) ರೋಣ ತಾಲ್ಲೂಕು ಖುಷ್ಕಿ ಭೂ ಅಭಿವೃದ್ಧಿ ಮಂಡಳಿಯು ಕಾರ್ಯಕ್ಷಾಪ್ತಿಯಲ್ಲಿ ಬರುವುದಿಲ್ಲ.

ಆ) ಈ ಯೋಜನೆಯನ್ನು ಮಂಜೂರು ಮಾಡುವ ಪ್ರಸ್ತಾಪ ಸಧ್ಯಕ್ಕೆ ಬರುವುದಿಲ್ಲ.

ಇ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಧಾರವಾಡ ಜಿಲ್ಲೆಯಲ್ಲಿ ರಸ್ತೆಗಳ ಅಭಿವೃದ್ಧಿ ಬಗ್ಗೆ

೧೨೧ (೨೯೭) ಶ್ರೀ ಜ್ಞಾನದೇವ ದೊಡ್ಡ ಮೋಟಿ(ರೋಣ).—ಮಾನ್ಯ ಲೋಕೋಪಯೋಗಿ, ಆಚ್ಚುಕಟ್ಟು ಪ್ರದೇಶಾಭಿವೃದ್ಧಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:—

ಅ) ಈನೇ ಪಂಚವಾರ್ಷಿಕ ಯೋಜನೆಯಲ್ಲಿ ಸರಕಾರದವರು ರಸ್ತೆಗಳ ಅಭಿವೃದ್ಧಿ ದೃಷ್ಟಿಯಿಂದ ಧಾರವಾಡ ಜಿಲ್ಲೆಯಲ್ಲಿ ಹಿಂದುಳಿದ ಪ್ರದೇಶಗಳೆಂದು ಯಾವ ಯಾವ ತಾಲ್ಲೂಕುಗಳನ್ನು ಗುರುತಿಸಿದ್ದಾರೆ ?

ಆ) ಹಿಂದುಳಿದ ತಾಲ್ಲೂಕ್‌ಗಳೆಂದು ಪರಿಗಣಿಸಲ್ಪಟ್ಟ ತಾಲ್ಲೂಕುಗಳಿಗೆ ವಿಶೇಷ ಅನುದಾನವನ್ನೇ ನಾದರೂ ನೀಡಲಾಗಿದೆಯೇ ?

ಇ) ಹಾಗಿದ್ದಲ್ಲಿ, ಅನುದಾನದ ವಿವರಗಳನ್ನು ನೀಡುವುದು ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು) ?

ಶ್ರೀ ಪೆಚ್. ಡಿ. ದೇವೇಗೌಡ (ಲೋಕೋಪಯೋಗಿ ಕಾಡಾ ಮತ್ತು ನೀರಾವರಿ ಸಚಿವರು).—

ಅ) ಈನೇ ಪಂಚವಾರ್ಷಿಕ ಯೋಜನೆಯಲ್ಲಿ ರಸ್ತೆಗಳ ಅಭಿವೃದ್ಧಿ ದೃಷ್ಟಿಯಿಂದ ಹಿಂದುಳಿದ ಪ್ರದೇಶಗಳೆಂದು ಧಾರವಾಡ ಜಿಲ್ಲೆಯಲ್ಲಿ ಮುಂಡರಗಿ ಹಾಗೂ ರೋಣ ತಾಲ್ಲೂಕುಗಳೆಂದು ಗುರುತಿಸಲ್ಪಟ್ಟಿವೆ.

ಆ) ಈ ತಾಲ್ಲೂಕುಗಳಿಗೆ ವಿಶೇಷ ಅನುದಾನ ನೀಡಿರುವುದಿಲ್ಲ. ಆದರೆ ಈ ತಾಲ್ಲೂಕುಗಳಲ್ಲಿ ೧೯೭೧ ರಲ್ಲಿ ೧೦೦ ಚ. ಕಿ. ಮೀ.ಗೆ ೨೦ ರಿಂದ ೨೧ ಕಿ: ಮೀ. ಉದ್ದ ರಸ್ತೆ ಇದ್ದಿದ್ದು, ಈಗ ೩೨ ರಿಂದ ೩೫ ಕಿ. ಮೀ. ಉದ್ದ ಇವೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಪಿ. ಯು. ಸಿ. ಮಂಡಳಿ ವಿಂಗಡನೆಯ ಬಗ್ಗೆ

೧೨೨(೧೦೦) ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಸಂಕೇಶ್ವರ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:—

ಅ) ರಾಜ್ಯದಲ್ಲಿ ಒಂದೇ ಪಿ.ಯು. ಸಿ. ಮಂಡಲಿ ಇರುವುದರಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆಯ ಉತ್ತೀರ್ಣತೆಯಲ್ಲಿ ಪಕ್ಷಪಾತ ಆಗುತ್ತಿರುವುದು ಸರಕಾರದವರ ಗಮನಕ್ಕೆ ಬಂದಿದೆಯೆ, ಹಾಗಿದ್ದಲ್ಲಿ ವಿಶ್ವವಿದ್ಯಾನಿಲಯದ ವ್ಯಾಪ್ತಿಯಂತೆ ಪಿ. ಯು. ಸಿ. ಮಂಡಲಿಗಳನ್ನು ವಿಂಗಡಿಸಲು ತಡವಾಗಿರುವುದಕ್ಕೆ ಕಾರಣಗಳೇನು ?

ಆ) ರಾಜ್ಯದ ಪ್ರತಿ ಕಂದಾಯ ವಿಭಾಗದ ಆಡಿಯಲ್ಲಿ ಬರುವ ಪರೀಕ್ಷೆಯ ಫಲಿತಾಂಶವನ್ನು ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೆ ಶೇಕಡಾವಾರು ಪ್ರಕಾರ ಕೊಡುವುದು ?